# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 414 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್,<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 12.12.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪೊಲೀಸ್ ಇಲಾಖೆಯು ಹಲಾಲ್ ಪ್ರಮಾಣ ಪತ್ರವನ್ನು ಪಡೆದಿರುವ ಎಷ್ಟು ಸಂಸ್ಥೆಗಳು ವಿಚಾರಣೆ ನಡೆಸಿದೆ; ಈ ರೀತಿಯಾಗಿ ಖಾಸಗಿ ವ್ಯಕ್ತಿಗಳಿಂದ ಸರ್ಕಾರದ ಯಾವುದೇ ಮಾನ್ಯತೆ ಪಡೆಯದೆ ಇರುವ ಸಂಸ್ಥೆಗಳಿಂದ ಹಾಗೂ ಒಂದು ಧರ್ಮ ವಿಶೇಷ ಆಚರಣೆಯನ್ನು ಪಾಲಿಸುವ ಸಲುವಾಗಿ ಪ್ರಮಾಣ ಪತ್ರ ಪಡೆದಿರುವ ಹಲವಾರು ಆಸ್ಪತ್ರೆಗಳು, ಕಟ್ಟಡ ನಿರ್ಮಾಣ ಸಂಸ್ಥೆಗಳು, ಇದಕ್ಕಾಗಿ ನೀಡುವ ಶುಲ್ಕದ ಮೂಲಕ ಭಯೋತ್ಪಾದನೆ, ಕೋಮು ಗಲಭೆಗಳನ್ನು ಹಾಗೂ ಸಮಾಜದಲ್ಲಿ ಸಮಾಜಘಾತುಕ ಶಕ್ತಿಗಳ ಮೂಲಕ ಗಲಭೆಗಳನ್ನು ಸೃಷ್ಟಿಸುವ ವ್ಯಕ್ತಿ, ಸಂಘಟನೆಗಳಿಗೆ ಆರ್ಥಿಕ ಸಹಾಯ ಮಾಡಿದಂತಾಗಲಿಲ್ಲವೇ; ಈ ಕುರಿತು ಸರ್ಕಾರದ ನಿಲುವೇನು; | ಹಲಾಲ್ ಪ್ರಮಾಣಪತ್ರವನ್ನು ಪಡೆದಿರುವ ಯಾವುದೇ ಸಂಸ್ಥೆಗಳನ್ನು ವಿಚಾರಣೆ ನಡೆಸಿರುವುದಿಲ್ಲ ಮತ್ತು ಸದರಿ ಸಂಸ್ಥೆಗಳಿಗೆ ಆರ್ಥಿಕ ಸಹಾಯ ಮಾಡಿದ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಆ) | ಈ ರೀತಿ ಪ್ರಮಾಣ ಪತ್ರಗಳನ್ನು ನೀಡುವ ಸಂಸ್ಥೆಗಳು ಸರ್ಕಾರದಿಂದ ಅನುಮತಿ ಪಡೆದಿರುವ ಕುರಿತು ಪೊಲೀಸ್ ಇಲಾಖೆ ಪರಿಶೀಲಿಸಿದೆಯೇ; ಹಲಾಲ್ ಪ್ರಮಾಣ ಪತ್ರ ನೀಡಲು ಸಂಗ್ರಹಿಸುವ ಶುಲ್ಕವು ಭಯೋತ್ಪಾದನಾ ಕೃತ್ಯಗಳಿಗೆ ಬಳಕೆಯಾಗುತ್ತಿರುವ ಕುರಿತು ಇಲಾಖೆಯ ನಿಲುವೇನು; | ಈ ರೀತಿ ಸರ್ಕಾರದಿಂದ ಅನುಮತಿ ಪಡೆದಿರುವ ಕುರಿತು ಪೊಲೀಸ್ ಇಲಾಖೆ ಪರಿಶೀಲಿಸಿರುವುದಿಲ್ಲ. ಹಲಾಲ್ ಪ್ರಮಾಣ ಪತ್ರ ನೀಡಲು ಸಂಗ್ರಹಿಸುವ ಶುಲ್ಕವು ಭಯೋತ್ಪಾದನಾ ಕೃತ್ಯಗಳಿಗೆ ಬಳಕೆಯಾಗುತ್ತಿರುವ ಕುರಿತು ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಇ) | ಮಾನ್ಯತೆ ಪಡೆಯದ ಖಾಸಗಿ ಸಂಸ್ಥೆಗಳು ಸಂಗ್ರಹಿಸುವ ಶುಲ್ಕವನ್ನು ಭಯೋತ್ಪಾದನಾ ಕೃತ್ಯಗಳಿಗೆ ಹಾಗೂ ಕೋಮು ಗಲಭೆಗಳನ್ನು ಸೃಷ್ಟಿಸಲು ಬಳಸುತ್ತಿರುವ ಕುರಿತು ಸರ್ಕಾರದ ನಿಲುವೇನು; ಈ ಸಂಸ್ಥೆಗಳು ಭಯೋತ್ಪಾದನಾ ಸಂಸ್ಥೆಗಳಿಗೆ ಹಾಗೂ ಕೋಮು ಗಲಭೆ ಸೃಷ್ಟಿ ಮಾಡುವವರಿಗೆ ಆರ್ಥಿಕ ಸಹಾಯ ಮಾಡುತ್ತಿರುವ ಕುರಿತು ಹಾಗೂ ಭಯೋತ್ಪಾದಕರನ್ನು ಬಂಧಿಸಿದಾಗ ಅವರ ಪರವಾಗಿ ಕಾನೂನು ಹೋರಾಟ ಮಾಡಲು ಈ ಹಣವನ್ನು ಬಳಸಿಕೊಳ್ಳುತ್ತಿರುವ ಕುರಿತು ಸರ್ಕಾರದ ನಿಲುವೇನು? | ಈ ಸಂಸ್ಥೆಗಳು ಭಯೋತ್ಪಾದನಾ ಸಂಸ್ಥೆಗಳಿಗೆ ಹಾಗೂ ಕೋಮು ಗಲಭೆ ಸೃಷ್ಟಿ ಮಾಡುವವರಿಗೆ ಆರ್ಥಿಕ ಸಹಾಯ ಮಾಡುತ್ತಿರುವ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |

ಹೆಚ್‌ಡಿ 225 ಪಿಸಿಇ 2024

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು.